ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಕರ್ನಾಟಕ ವಸತಿ ಶಾಲಾ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಶಿಕ್ಷಕರ ಕುರಿತು

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ) -

1101 (1135) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕರ್ನಾಟಕ ವಸತಿ ಶಾಲೆ ಸಂಘದ ಅಧೀನದಲ್ಲಿನ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಆಧಾರದ ಶಿಕ್ಷಕರ ಸಂಖ್ಯೆ ಎಷ್ಟು;

(ಆ) ಇವರು ಎಷ್ಟು ವರ್ಷಗಳಿಂದ ಕಾರ್ಯವನ್ನು ನಿರ್ವಹಿಸುತ್ತಿದ್ದಾರೆ; ಇವರಿಗೆ ನೀಡುತ್ತಿರುವ ಗೌರವಧನ ಎಷ್ಟು; (ವಿವರ ನೀಡುವುದು)

(ಇ) ಕಳೆದ 5 ತಿಂಗಳಿಂದ ಗೌರವಧನವನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಶಿಕ್ಷಕರ ಗೌರವಧನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಇವರಿಗೆ ಸೇವಾ ಭದ್ರತೆ ನೀಡಿ ಖಾಯಂಗೊಳಿಸಲು ಸರ್ಕಾರ ಆಲೋಚಿಸಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು?